ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 09-03-2021 ಪ್ರಶ್ನೆ ಸಂಖ್ಯೆ : 680(788)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 09-03-2021

ಉತ್ತರಿಸುವ ಸಚಿವರು: ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು

ವಿಷಯ : ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಬಗ್ಗೆ

(ಅ) ಚನ್ನರಾಯಪಟ್ಟಣ ಪುರಸಭೆ ವ್ಯಾಪ್ತಿಯಲ್ಲಿರುವ ಹಲವಾರು ಬಡಾವಣೆಗಳಲ್ಲಿ ಒಳಚರಂಡಿ ವ್ಯವಸ್ಥೆ ಮತ್ತು ರಸ್ತೆಗಳು ಇಲ್ಲದೆ ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಯಾವ ಯಾವ ಬಡಾವಣೆಗಳಲ್ಲಿ ಈ ಸಮಸ್ಯೆಗಳು ಕಂಡುಬಂದಿವೆ ಮತ್ತು ಈ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಾರ್ಡ್‌ವಾರು ವಿವರ ನೀಡುವುದು)

(ಇ) ಕಳೆದ 2 ವರ್ಷಗಳಲ್ಲಿ ಚನ್ನರಾಯಪಟ್ಟಣ ಪುರಸಭೆ ಅಭಿವೃದ್ಧಿಗಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗಿದೆ; (ವಿವರ ನೀಡುವುದು)

(ಈ) ಚನ್ನರಾಯಪಟ್ಟಣ ಪುರಸಭೆ ವ್ಯಾಪ್ತಿಯಲ್ಲಿ ಕಳೆದ 2 ವರ್ಷಗಳಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳ ಒಟ್ಟು ಮೊತ್ತವೆಷ್ಟು; ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರ್ಯಾರು? (ಕಾಮಗಾರಿವಾರು ವಿವರ ನೀಡುವುದು)